**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ,**
**ಮೂಡಿಗೆರೆ**
**ಸಿ.ಸಿ.1717/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಜಗದೀಶ್ ಎಸ್.ಜಿ. | ಪ್ರಾಸಾ-7 |
| ತಂದೆಯ ಹೆಸರು | : ಎಸ್.ಕೆ.ಗಂಗಾಧರಪ್ಪ | ಚಾಸಾ-17 |
| ವಯಸ್ಸು | : 54 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಹೆಚ್.ಸಿ. | ದಿನಾಂಕಃ17.02.2026. |
| ವಾಸಸ್ಥಳ | : ಮೂಡಿಗೆರೆ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನಾನು ದಿ.16.03.2022 ರಿಂದ ಇಲ್ಲಿಯವರೆಗೂ ಮೂಡಿಗೆರೆ ಪೋಲಿಸ್ ಠಾಣೆಯಲ್ಲಿ ಹೆಚ್.ಸಿ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.03.04.2024 ರಂದು ನಾನು ಠಾಣಾ SHO ಕರ್ತವ್ಯದಲ್ಲಿ ಇದ್ದಾಗ ಸ.6.30 ರ ಸಮಯಕ್ಕೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿಕೊಂಡಿರುತ್ತೇನೆ. ನಂತರ ಸದರಿ ದೂರನ್ನು 76/2024 ರ ಕಲಂ 279, 337 IPC ರೀತ್ಯಾ ಪ್ರಕರಣವನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಘನ ನ್ಯಾಯಾಲಯಕ್ಕೆ ನಿವೇದನೆ ಮಾಡಿಕೊಂಡಿರುತ್ತೇನೆ. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆ ಸಂಬಂಧ ಚಾಸಾ-20 ರವರಿಗೆ ನೀಡಿರುತ್ತೇನೆ.

ಸಾಕ್ಷಿಯು ನಿಪಿ-1 ಮತ್ತು 2 ರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-1(ಬಿ) ಮತ್ತು 2(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಂ.ಎಂ.ಆರ್ ವಕೀಲರಿಂದಃ**

ನಿಪಿ-1 ನ್ನು ಸೃಷ್ಟಿ ಮಾಡಿಕೊಂಡು ಈ ಪ್ರಕರಣವನ್ನು ದಾಖಲು ಮಾಡಲಾಗಿರುತ್ತದೆ ಎಂದರೆ ಸರಿಯಲ್ಲ. ನಿಪಿ-2 ನ್ನು ಇಲಾಖಾ ಅಂಕಿ ಅಂಶಕ್ಕೋಸ್ಕರ ಸುಳ್ಳು ಪ್ರಕರಣವನ್ನು ದಾಖಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗೂ, ಈ ಪ್ರಕರಣಕ್ಕೂ, ಒಂದಕ್ಕೊಂದು ಸಂಬಂಧ ಇಲ್ಲ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

C/c ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.